ಪ್ರಸಕ್ತ ವರ್ಷ 200 ಕೋಟಿ ರೂ. ವೆಚ್ಚದಲ್ಲಿ 100 ಹೊಸ ಪೊಲೀಸ್ ಠಾಣೆ ನಿರ್ಮಾಣ

ತುಮಕೂರು, ಎ.29: ಪೊಲೀಸರು ನೆಮ್ಮದಿಯಿಂದ ಕರ್ತವ್ಯ ನಿರ್ವಹಿಸ ಬೇಕಾದರೆ ಅವರು ಕೆಲಸ ಮಾಡುವ ಪೊಲೀಸ್ ಠಾಣೆ ಹಾಗೂ ವಾಸಿಸುವ ಮನೆ ಸುಸಜ್ಜಿತವಾಗಿರಬೇಕು, ಈ ನಿಟ್ಟಿನಲ್ಲಿ 200 ಕೋಟಿ ರೂ. ವೆಚ್ಚದಲ್ಲಿ 100 ಹೊಸ ಪೊಲೀಸ್ ಠಾಣೆ ಮತ್ತು 20 ಸಾವಿರ ಪೊಲೀಸರಿಗೆ ಎರಡು ಕೊಠಡಿಗಳ ನೂತನ ವಸತಿ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರಗ ಜ್ಞಾನೇಂದ್ರ ತಿಳಿಸಿದ್ದಾರೆ.

ಶಿರಾ ನಗರದಲ್ಲಿ ಸುಮಾರು 2.64 ಕೋಟಿ ರೂ.ಗಳ ವೆಚ್ಚದಲ್ಲಿ ಪೊಲೀಸ್ ಗೃಹ ನಿರ್ಮಾಣ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಶಿರಾ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರ ಕಚೇರಿ, ಶಿರಾ ಸಿಪಿಐ ಹಾಗೂ ಪೊಲೀಸ್ ಠಾಣೆಯ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಎಫ್‌ಎಸ್‌ಎಲ್ ಲ್ಯಾಬ್‌ಗಳನ್ನು ಬಲಗೊಳಿಸುವ ನಿಟ್ಟಿನಲ್ಲಿ ವಿಧಿ-ವಿಜ್ಞಾನ ಪ್ರಯೋಗಾಲಯಗಳನ್ನು ಹೆಚ್ಚಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಈ ವರ್ಷವೇ ಬಳ್ಳಾರಿ, ಹುಬ್ಬಳ್ಳಿ ಜಿಲ್ಲೆಯಲ್ಲಿ ಎಫ್‌ಎಸ್‌ಎಲ್ ಪ್ರಯೋಗಾಲಯ ಮತ್ತು ಮುಂದಿನ ಹಂತದಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಸ್ಥಾಪಿಸಲಾಗುವುದು ಎಂದ ಸಚಿವರು, ಸಂಚಾರಿ ಎಫ್‌ಎಸ್‌ಎಲ್‌ಗಳನ್ನೂ ಸಹ ಆರಂಭಿಸಲಾಗಿದ್ದು, ಪ್ರಕರಣ ನಡೆದ ಘಟನಾ ಸ್ಥಳಕ್ಕೆ ತೆರಳಿ ಪರಿಶೀಲಿಸಿ ಸ್ಯಾಂಪಲ್ ಪಡೆದು ವರದಿ ನೀಡಲು ಪೊಲೀಸರಿಗೆ ಸಂಚಾರಿ ಲ್ಯಾಬ್‌ಗಳು ಸಹಕಾರಿಯಾಗಲಿವೆ ಎಂದರು.

ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸೈಬರ್ ವಿಭಾಗವನ್ನು ಬಲಪಡಿಸಲಾಗುತ್ತಿದೆ.ಈ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲೂ ಸಹ ಸೈಬರ್ ಠಾಣೆಯನ್ನು ಪ್ರಾರಂಭಿಸಲಾಗಿದ್ದು,ಅಗತ್ಯವಿರುವ ಉಪಕರಣಗಳನ್ನು ನೀಡಲಾಗಿದೆ.ಸೈಬರ್ ಅಪರಾಧ ನಡೆದ 2 ಗಂಟೆಯೊಳಗಾಗಿ ಠಾಣೆಗೆ ತಿಳಿಸಿದಲ್ಲಿ ಅಕೌಂಟ್‌ಗಳನ್ನು ಫ್ರೀಝ್ ಮಾಡಿಸುವ ಅವಕಾಶವಿರುತ್ತದೆ ಈ ನಿಟ್ಟಿನಲ್ಲಿ ಬ್ಯಾಂಕ್‌ಗಳು ಸಹಕಾರ ನೀಡಲಿವೆ ಎಂದು ಗೃಹ ಸಚಿವರು ತಿಳಿಸಿದರು.

> ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳೂ ಸಹ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರತಿ ಪೊಲೀಸ್ ಠಾಣೆಯಲ್ಲಿ ಕನಿಷ್ಠ 3 ಮಹಿಳಾ ಕಾನ್‌ಸ್ಟೇಬಲ್ ಇರುವಂತೆ ನೋಡಿಕೊಳ್ಳಲಾಗುವುದು ಮತ್ತು ಪ್ರತಿಯೊಂದು ಜಿಲ್ಲೆಯಲ್ಲಿಯೂ ಸಹ ಮಹಿಳಾ ಪೊಲೀಸ್ ಠಾಣೆಯನ್ನು ಸ್ಥಾಪಿಸಲಾಗಿದೆ
> ■ ಆರಗ ಜ್ಞಾನೇಂದ್ರ, ಗೃಹ ಸಚಿವರು

ಪೊಲೀಸ್ ಇಲಾಖೆಗೆ ಅಗತ್ಯ ಶಸ್ತ್ರಾಸ್ತ್ರಗಳು ಮತ್ತು ಕಾಯ್ದೆಗಳಿಗೆ ಅಗತ್ಯ ತಿದ್ದುಪಡಿ ತರುವ ಮೂಲಕ ಪೊಲೀಸರಿಗೆ ಶಕ್ತಿ ತುಂಬುವ ಕಾರ್ಯ ನಡೆಯುತ್ತಿದೆ. ಸಮಾಜದಲ್ಲಿ ನಾಗರೀಕತೆ ಮತ್ತು ಸುಶಿಕ್ಷಿತ ವರ್ಗ ಹೆಚ್ಚಿದಂತೆಲ್ಲಾ ಶಾಂತಿಯುತ ಸಮಾಜ ನಿರ್ಮಾಣವಾಗಬೇಕಿತ್ತು.ಪೊಲೀಸ್ ಠಾಣೆಗಳು ಮತ್ತು ನ್ಯಾಯಾಲಯಗಳಲ್ಲಿ ಅಪರಾಧ ಪ್ರಕರಣಗಳು ಕಡಿಮೆಯಾಗಬೇಕಿತ್ತು. ಆದರೆ ಇಂದಿನ ಪರಿಸ್ಥಿತಿ ಇದಕ್ಕೆ ವ್ಯತಿರಿಕ್ತವಾಗಿದೆ. ಶಿಕ್ಷಣ ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿದೆ. ಆದರೆ ಇಂದಿನ ಶಿಕ್ಷಣ ನಮಗೆ ಬದುಕುವ ಸಂಸ್ಕಾರವನ್ನು ಅದರಲ್ಲೂ ಒಬ್ಬ ಮನುಷ್ಯನಾಗಿ ಬದುಕುವ ಸಂಸ್ಕಾರವನ್ನು ನೀಡುತ್ತಿಲ್ಲ.ಇದರಿಂದಾಗಿ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿದ್ದು, ಪೊಲೀಸರ ಮೇಲೆ ಹೆಚ್ಚಿನ ಹೊರೆ ಬೀಳುತ್ತಿದೆ ಎಂದು ಸಚಿವರು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಸಿ.ಎಂ. ರಾಜೇಶ್ ಗೌಡ, ಎಂಎಲ್‌ಸಿ ಚಿದಾನಂದ ಎಂ.ಗೌಡ, ರೇಷ್ಮೆ ಮಂಡಳಿ ಅಧ್ಯಕ್ಷ ಎಸ್. ಆರ್. ಗೌಡ, ಜಿಲ್ಲಾಧಿಕಾರಿ ವೈ.ಎಸ್. ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಶಹಪೂರ ವಾಡ್, ಡಿವೈಎಸ್ಪಿ ಕುಮಾರಪ್ಪ ಉಪಸ್ಥಿತರಿದ್ದರು.

ಎನ್‌ಇಪಿ ಅಳವಡಿಕೆಯಲ್ಲಿ ಕರ್ನಾಟಕವೇ ಮುಂಚೂಣಿಯಲ್ಲಿದೆ

ಶಿಕ್ಷಣ ಸಚಿವ ಬಿ.ಸಿ. ನಾಗೇಶ್

ಬೆಂಗಳೂರು, ಎ.29: 'ರಾಷ್ಟ್ರೀಯ ಶಿಕ್ಷಣ ನೀತಿ-2020' ಅನುಷ್ಠಾನಗೊಳಿಸುವಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ಎನ್‌ಇಪಿಯ ಅಳವಡಿಕೆಯ ದಾಖಲೆಗಳನ್ನು ಸಿದ್ಧಪಡಿಸಿ ಕೇಂದ್ರ ಸರಕಾರಕ್ಕೆ ಸಲ್ಲಿಕೆ ಮಾಡಲಾಗಿದೆ. 2022-23ನೇ ಸಾಲಿನಿಂದ ಪೂರ್ವ ಬಾಲ್ಯಾವಸ್ಥೆ ಹಂತದಿಂದಲೇ 'ರಾಷ್ಟ್ರೀಯ ಶಿಕ್ಷಣ ನೀತಿ-2020' ಅನುಷ್ಠಾನಗೊಳಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಹೇಳಿದ್ದಾರೆ.

ಶುಕ್ರವಾರ ಭಾರತೀಯ ವಿಜ್ಞಾನ ಮಂದಿರದಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನೇತೃತ್ವದಲ್ಲಿ ನಡೆದ 'ರಾಷ್ಟ್ರೀಯ ಶೈಕ್ಷಣಿಕ ಪಠ್ಯಕ್ರಮ ಚೌಕಟ್ಟಿನ(ಎನ್ಸಿಎಫ್) ಕಡ್ಡಾಯ ಮಾರ್ಗದರ್ಶಿ ಕೈಪಿಡಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ಶಿಕ್ಷಣ ಇಲಾಖೆಯು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲು ಸಜ್ಜಾಗಿದೆ. ಭವ್ಯ ಭಾರತದ ಭವಿಷ್ಯವನ್ನು 'ರಾಷ್ಟ್ರೀಯ ಶಿಕ್ಷಣ ನೀತಿ-2020' ಬರೆಯಲಿದ್ದು, ಈ ಮಹತ್ವದ ಕಾರ್ಯದ ಪ್ರಮುಖ ಪ್ರಕ್ರಿಯೆಗಳು, ಚಟುವಟಿಕೆಗಳು ಕರ್ನಾಟಕದಲ್ಲಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದು ಅವರು ಹೇಳಿದರು.

'ಭಾರತದ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ ಮತ್ತು ಬದಲಾವಣೆ ತರುವ 'ರಾಷ್ಟ್ರೀಯ ಶಿಕ್ಷಣ ನೀತಿ-2020'ರ ಪ್ರಮುಖ ಪ್ರಕ್ರಿಯೆಗಳು ಕರ್ನಾಟಕದಲ್ಲಿ ನಡೆದಿವೆ. ದೇಶದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿರುವ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ನಡೆದಿರುವುದು ಹೆಮ್ಮೆಯ ಸಂಗತಿಯಾಗಿದೆ' ಎಂದು ಅವರು ಹೇಳಿದರು. ಎನ್‌ಇಪಿಯಲ್ಲಿ ತೊಡಗಿಸಿಕೊಂಡಿರುವ ತಜ್ಞರು ಕರ್ನಾಟಕದ ಸಿದ್ಧತೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇದು ರಾಜ್ಯದ ಶಿಕ್ಷಣ ಇಲಾಖೆಗೆ ಸಂದ ಗೌರವ' ಎಂದರು. ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ, ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟು ಚಾಲನಾ ಸಮಿತಿ ಅಧ್ಯಕ್ಷ ಡಾ. ಕೆ. ಕಸ್ತೂರಿರಂಗನ್, ಕೇಂದ್ರ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಕಾರ್ಯದರ್ಶಿ ಕೆ. ಅನಿತಾ ಉಪಸ್ಥಿತರಿದ್ದರು.

ಭಾರತದ ಶಿಕ್ಷಣ ವ್ಯವಸ್ಥೆ ಈಗ ಸರಿ ದಾರಿಗೆ

> ಭಾರತ ಮೂಲತಃ ಜ್ಞಾನದ ರಾಷ್ಟ್ರವಾಗಿದೆ. ಆದರೆ, ಬ್ರಿಟೀಷರು ಸೇರಿದಂತೆ ಕೆಲ ವ್ಯಕ್ತಿಗಳ ದುರುದ್ದೇಶದಿಂದ ಭಾರತೀಯ ಶಿಕ್ಷಣದ ಮೂಲ ಉದ್ದೇಶ ಮತ್ತು ಸ್ವರೂಪವನ್ನು ಕಳೆದುಕೊಳ್ಳಬೇಕಾಯಿತು. ಬ್ರಿಟೀಷರು ತಮ್ಮ ಅನುಕೂಲಕ್ಕಾಗಿ ಭಾರತದ ಶಿಕ್ಷಣ ವ್ಯವಸ್ಥೆ ಮತ್ತು ಪಠ್ಯಕ್ರಮವನ್ನು ಸಿದ್ಧಪಡಿಸಿದ್ದರು. ಆದರೆ, ಈಗ 'ರಾಷ್ಟ್ರೀಯ ಶಿಕ್ಷಣ ನೀತಿ-2020' ಮೂಲಕ ಭಾರತದ ಶಿಕ್ಷಣ ವ್ಯವಸ್ಥೆ ಸರಿ ದಾರಿಗೆ ಬರುತ್ತಿದೆ. ಈ ಮೂಲಕ ಆಮೂಲಾಗ್ರ ಬದಲಾವಣೆಯಾಗಿ ರಾಷ್ಟ್ರದ ಪ್ರತಿ ಪ್ರಜೆ, ಪ್ರತಿ ಕ್ಷೇತ್ರದ ಅಭಿವೃದ್ಧಿಗೆ ನಾಂದಿಯಾಡುತ್ತಿದೆ.
> ■ ಬಿ.ಸಿ. ನಾಗೇಶ್, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ

ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಎ.29: ಕರ್ನಾಟಕ ಸಾಂಸ್ಕೃತಿಕ ಪರಿಷತ್ ವತಿಯಿಂದ ನೀಡುವ ಬಸವಶ್ರೀ ಪ್ರಶಸ್ತಿಗೆ ಹಾಗೂ ಜೀವಮಾನ ಸಾಧನೆ ಪ್ರಶಸ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಸಾಹಿತ್ಯ, ಪತ್ರಿಕೋದ್ಯಮ, ರಾಜಕೀಯ, ದೂರದರ್ಶನ ಸೇರಿದಂತೆ ಇತರೆ ಕ್ಷೇತ್ರದಲ್ಲಿ ಸಾಧನೆ ಮಾಡಿರಬೇಕು ಎಂದು ಪ್ರಕಟನೆಯಲ್ಲಿ ತಿಳಿಸಿದೆ.

ಆಸಕ್ತರು ಮೇ 9ರೊಳಗೆ ಅಧ್ಯಕ್ಷ, ಕರ್ನಾಟಕ ಸಾಂಸ್ಕೃತಿಕ ಪರಿಷತ್ತು, ನಂ.14, ಗುರುಕುಲ, ಶ್ರೀ ಶಿವಕುಮಾರ್ ಸ್ವಾಮಿ ಲೇಔಟ್, ವಿವೇಕಾನಂದ ಶಾಲೆ, ಹೆಸರಘಟ್ಟ, ಬೆಂಗಳೂರು- 560088 ವಿಳಾಸಕ್ಕೆ ತಮ್ಮ ಸ್ವ-ವಿವರ ಹಾಗೂ 3 ಭಾವಚಿತ್ರದೊಂದಿಗೆ ಲಕೋಟೆಯ ಮೇಲೆ ಪ್ರಶಸ್ತಿಯ ಹೆಸರು ಬರೆದು ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 99641 95968ಗೆ ಸಂಪರ್ಕಿಸಬಹುದಾಗಿದೆ.

ಜನರ ಕುಂದು ಕೊರತೆ ನಿವಾರಣೆಗಾಗಿ ಫಿಕ್ಸ್ ಮೈ ಸ್ಟ್ರೀಟ್ ಆ್ಯಪ್ ಸಿದ್ಧಗೊಳಿಸಿದ ಬಿಬಿಎಂಪಿ

ಬೆಂಗಳೂರು, ಎ.29: ಸಾರ್ವಜನಿಕರು ತಮ್ಮ ಬೀದಿಯಲ್ಲಿರುವ ಸಮಸ್ಯೆಗಳಾದ ರಸ್ತೆ ಗುಂಡಿ, ಕಸ, ಬೀದಿ ದೀಪ ಸೇರಿದಂತೆ ಇತರೆ ಸಮಸ್ಯೆಗಳ ಬಗ್ಗೆ ಫೋಟೊ ಸಮೇತ ದೂರು ನೀಡಲು ಮತ್ತು ಆ ಸಮಸ್ಯೆಗಳನ್ನು ತ್ವರಿತಗತಿಯಲ್ಲಿ ನಿವಾರಿಸುವ ಸಲುವಾಗಿ ಬಿಬಿಎಂಪಿಯು ಫಿಕ್ಸ್ ಮೈ ಸ್ಟ್ರೀಟ್ ಮೊಬೈಲ್ ಆ್ಯಪ್ ಹಾಗೂ ಡೆಸ್ಕ್‌ಟಾಪ್ ಆ್ಯಪ್ ಅನ್ನು ಉನ್ನತೀಕರಿಸಲಾಗಿದೆ.

ನಾಗರಿಕರು ತಮ್ಮ ಪ್ರದೇಶದಲ್ಲಿನ ಸಮಸ್ಯೆಗಳ ಬಗ್ಗೆ ನಮ್ಮ ಫಿಕ್ಸ್ ಮೈ ಸ್ಟ್ರೀಟ್ ಆ್ಯಪ್‌ನಲ್ಲಿ ಲಾಗಿನ್ ಆದ ಬಳಿಕ ಜಿಯೋ ಲೊಕೇಷನ್ ಉಳ್ಳ ಫೋಟೊ ಸಮೇತ ನೀಡುವ ದೂರುಗಳು ಸಂಬಂಧಪಟ್ಟ ಅಧಿಕಾರಿಗಳ ಮೊಬೈಲ್‌ಗೆ ರವಾನೆಯಾಗುತ್ತದೆ. ಆ ಬಳಿಕ ಸಂಬಂಧಪಟ್ಟ ಅಧಿಕಾರಿಯು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ಪರಿಶೀಲಿಸಲಿದ್ದಾರೆ. ನಂತರ ಸಮಸ್ಯೆ ನಿವಾರಿಸಿದ ಕುರಿತು ಫೋಟೊ ಸಹಿತ ಮಾಹಿತಿಯನ್ನು ದೂರುದಾರರಿಗೆ ಕಳುಹಿಸಲಾಗುತ್ತದೆ. ನಾಗರಿಕರು ನೀಡುವ ದೂರುಗಳ ಸ್ಥಿತಿಯನ್ನು ಆ್ಯಪ್‌ನಲ್ಲಿ ಪರಿಶೀಲನೆ ನಡೆಸಬಹುದಾಗಿದೆ. ಪಾಲಿಕೆಯಿಂದ ಬಗೆಹರಿಸಬಹುದಾದ ಸಮಸ್ಯೆಗಳನ್ನು ನಿಗದಿತ ಕಾಲಾವಧಿಯೊಳಗೆ ಇತ್ಯರ್ಥಪಡಿಸಲಾಗುತ್ತದೆ. ಬೆಸ್ಕಾಂ, ಜಲಮಂಡಳಿ ಮತ್ತು ಇತರ ಇಲಾಖೆಗಳಿಗೆ ಸಂಬಂಧಿಸಿದ ದೂರುಗಳನ್ನು ಆಯಾ ಇಲಾಖೆಯ ಅಧಿಕಾರಿಗಳಿಗೆ ದೂರುಗಳನ್ನು ರವಾನಿಸಲಾಗುತ್ತದೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆ ಅಂತರ್ಜಾಲ ರೆಫರಲ್ ವ್ಯವಸ್ಥೆ ಜಾರಿ

ಸಚಿವ ಡಾ.ಕೆ.ಸುಧಾಕರ್

ಬೆಂಗಳೂರು, ಎ.29: ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಡಿ ರೋಗಿಗಳನ್ನು ಹೆಚ್ಚುವರಿ ಚಿಕಿತ್ಸೆಗಾಗಿ ಉನ್ನತ ಮಟ್ಟದ ಸರಕಾರಿ ಆಸ್ಪತ್ರೆ ಅಥವಾ ಸಾಸ್ಟ್ ನೋಂದಾಯಿತ ಖಾಸಗಿ ಆಸ್ಪತ್ರೆಗೆ ಶಿಫಾರಸು ಮಾಡಲು 'ಅಂತರ್ಜಾಲ ರೆಫರಲ್ ವ್ಯವಸ್ಥೆ' ಜಾರಿಗೊಳಿಸಲಾಗಿದೆ.

ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸುತ್ತೋಲೆ ಹೊರಡಿಸಿದ್ದು, ದ್ವಿತೀಯ ಮತ್ತು ತೃತೀಯ ಹಂತದ ಚಿಕಿತ್ಸೆ ಅಗತ್ಯವಿರುವ ರೋಗಿಗಳನ್ನು ಸಕಾಲದಲ್ಲಿ ಮೇಲ್ಪಟ್ಟ ಉನ್ನತ ಚಿಕಿತ್ಸಾ ಆಸ್ಪತ್ರೆಗೆ ನಿರ್ದೇಶಿಸುವುದು ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ಪ್ರಮುಖ ಅಂಶವಾಗಿದೆ. ಈವರೆಗೆ, ರೆಫರಲ್ ಅನ್ನು ಹಸ್ತಪ್ರತಿ ಚೀಟಿಗಳಲ್ಲಿ ಮಾಡುತ್ತಿದ್ದು, ಇದು ರೆಫರ್ ಮಾಡುವ ವೈದ್ಯರಿಗೆ ಹಾಗೂ ರೋಗಿಗಳಿಗೆ ಶ್ರಮದಾಯಕವಾಗಿ ಪರಿಣಮಿಸುತ್ತಿತ್ತು.

ಹೊಸ ಅಂತರ್ಜಾಲ ರೆಫರಲ್ ವ್ಯವಸ್ಥೆಯಲ್ಲಿ, ಚಿಕಿತ್ಸೆ ನೀಡುವ ವೈದ್ಯರು ಮತ್ತು ಆಸ್ಪತ್ರೆಯ ನೋಡಲ್ ಅಧಿಕಾರಿಗಳು ತಮ್ಮ ಬಳಕೆದಾರರ ಗುರುತಿನ ಚೀಟಿಯ ಮೂಲಕ ಅಂತರ್ಜಾಲ ಪ್ರವೇಶಿಸಿ ರೋಗಿಗಳನ್ನು ಉನ್ನತ ಆಸ್ಪತ್ರೆಗೆ ರೆಫರ್ ಮಾಡುತ್ತಾರೆ.

> ಅಂತರ್ಜಾಲ ರೆಫರಲ್ ತಂತ್ರಜ್ಞಾನ ಆಧರಿತ ವ್ಯವಸ್ಥೆಯಿಂದ ರೋಗಿಗಳಿಗೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ದೊರೆಯುವುದರ ಜೊತೆಗೆ ಇಡೀ ವ್ಯವಸ್ಥೆಯಲ್ಲಿ ಪಾರದರ್ಶಕತೆ ಬರಲಿದೆ. ಎಲ್ಲಾ ರೋಗಿಗಳು, ಕುಟುಂಬದವರು ಹಾಗೂ ವೈದ್ಯರಿಗೆ ಇದರಿಂದ ಅನುಕೂಲವಾಗಲಿದೆ. ವಂಚನೆ, ದುರುಪಯೋಗವನ್ನು ತಡೆಗಟ್ಟಲು ಸಾಧ್ಯವಾಗುತ್ತದೆ.
> ■ ಡಾ.ಕೆ.ಸುಧಾಕರ್, ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ

ಪಿಎಸ್ಸೈ ನೇಮಕಾತಿ ಅಕ್ರಮ ಪ್ರಕರಣ

ನಿಷ್ಪಕ್ಷ ತನಿಖೆ ಸಿಐಡಿಯಿಂದ ಸಾಧ್ಯವಿಲ್ಲ

ರಾಮಲಿಂಗಾರೆಡ್ಡಿ

ಬೆಂಗಳೂರು, ಎ.29: ಪಿಎಸ್ಸೈ ನೇಮಕಾತಿ ಅಕ್ರಮ ಪ್ರಕರಣ ಸಂಬಂಧ ಸಿಐಡಿಯಿಂದ ನಿಷ್ಪಕ್ಷ ತನಿಖೆ ನಡೆಯಲು ಸಾಧ್ಯವಿಲ್ಲ ಎಂದು ಕೆಪಿಸಿಸಿ ಕಾಯಾಧ್ಯಕ್ಷ ರಾಮಲಿಂಗಾರೆಡ್ಡಿ ಹೇಳಿದ್ದಾರೆ.



ಶುಕ್ರವಾರ ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೊಡ್ಡ ಅಧಿಕಾರಿಗಳು, ಆಡಳಿತ ಪಕ್ಷದ ಪ್ರಭಾವಿ ರಾಜಕಾರಣಿಗಳೇ ಈ ಪ್ರಕರಣದಲ್ಲಿ ಶಾಮಿಲಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಆದ್ದರಿಂದ ಸರಕಾರದ ನೇರ ನಿಯಂತ್ರಣದಲ್ಲಿ ಇರುವ ಸಿಐಡಿಯಿಂದ ನಿಷ್ಪಕ್ಷ ತನಿಖೆ ನಡೆಯಲು ಸಾಧ್ಯವಿಲ್ಲ ಎನ್ನುವುದು ಸ್ಪಷ್ಟವಾಗಿ ತಿಳಿಯುತ್ತದೆ ಎಂದರು.

ಅಲ್ಲದೆ, ತನಿಖೆ ಆರಂಭವಾಗಿ ಇಷ್ಟು ದಿನವಾದರೂ ಒಂದು ಮಧ್ಯಂತರ ವರದಿಯನ್ನು ಬಿಡುಗಡೆ ಮಾಡಲು ಸಿಐಡಿ ತನಿಖಾ ಸಂಸ್ಥೆಗೆ ಸಾಧ್ಯವಾಗಿಲ್ಲ ಏಕೆ ಎಂದು ಪ್ರಶ್ನಿಸಿದ ಅವರು, ಬರೀ ಕಲಬುರಗಿ ಅಷ್ಟೇ ಅಲ್ಲ ಬೆಂಗಳೂರಿನ ಕೇಂದ್ರವೊಂದರಲ್ಲೂ ಅಕ್ರಮ ನಡೆದಿರುವ ದೂರುಗಳಿವೆ. ಈ ಬಗ್ಗೆಯೂ ಉನ್ನತ ತನಿಖೆಯ ಅಗತ್ಯವಿದೆ ಎಂದು ಒತ್ತಾಯಿಸಿದರು.

ನೇಮಕಾತಿ ಉಸ್ತುವಾರಿ ಅಧಿಕಾರಿ ಎಡಿಜಿಪಿ ಅಮೃತ್ ಪಾಲ್ ಅವರನ್ನು ಸರಕಾರ ವರ್ಗಾಯಿಸಿದ ಕಾರಣವೇನು. ಅಲ್ಲದೆ, ಅವರನ್ನು ಸಾಮಾನ್ಯ ವರ್ಗಾವಣೆ ಪದ್ಧತಿಯಲ್ಲಿ ವರ್ಗಾಯಿಸಲಾಗಿದೆ. ಹಗರಣಕ್ಕೂ ಈ ವರ್ಗಾವಣೆಗೂ ಸಂಬಂಧವಿಲ್ಲ ಎಂದು ಮುಖ್ಯಮಂತ್ರಿ ಹೇಳುವ ಮೂಲಕ ಅಕ್ರಮದ ಹೊಣೆ ಹೊರಬೇಕಾಗಿದ್ದ ಅಧಿಕಾರಿಯನ್ನು ಸಮರ್ಥಿಸಿದಂತೆ ಆಗುವುದಿಲ್ಲವೇ ಎಂದು ಪ್ರಶ್ನಿಸಿದರು.

ಪಿಎಸ್ಸೈ ನೇಮಕಾತಿ ಪಟ್ಟಿಯನ್ನೆ ರದ್ದುಪಡಿಸಿ ಹೊಸದಾಗಿ ಪರೀಕ್ಷೆ ನಡೆಸಿ ಪ್ರತಿಭಾವಂತರಿಗೆ ನ್ಯಾಯ ದೊರಕಿಸಿಕೊಡುವುದಾಗಿ ಗೃಹ ಮಂತ್ರಿ ಆರಗ ಜ್ಞಾನೇಂದ್ರ ಘೋಷಿಸಿದ್ದಾರೆ. ಪಿಎಸ್ಸೈ ನೇಮಕಾತಿ ಬ್ರಹ್ಮಾಂಡ ಭ್ರಷ್ಟಾಚಾರ, ಭಾರಿ ಅಕ್ರಮದ ಕರ್ಮಕಾಂಡ ಆಗಿದ್ದು ದಿನಕ್ಕೊಂದು ರೀತಿಯ ದಗಲ್ಬಾಜಿ ಸಂಗತಿಗಳು ಬೆಳಕಿಗೆ ಬಂದಿದ್ದರಿಂದ ಈ ಪಟ್ಟಿ ರದ್ದಾಗಲೇಬೇಕಿತ್ತು. ಸಹಜವಾಗಿ ಅದನ್ನು ಮಾಡಿದ್ದಾರೆ. ಹೀಗೆ ಮಾಡಿ ಜನರ ಗಮನ ಬೇರೆಡೆ ಸೆಳೆದು ಅಕ್ರಮದ ಆರೋಪಿಗಳನ್ನು ರಕ್ಷಿಸಬಹುದೆಂದು ಗೃಹ ಮಂತ್ರಿ ತಿಳಿದಿದ್ದರೆ ಅದು ಮೂರ್ಖತನವಾದೀತು ಎಂದು ರಾಮಲಿಂಗಾರೆಡ್ಡಿ ಎಚ್ಚರಿಸಿದ್ದಾರೆ.

ಭೂ ಸುಧಾರಣೆ ಕಾಯ್ದೆ ತಿದ್ದುಪಡಿಯಿಂದ ರೈತರಿಗೆ ಅನ್ಯಾಯ: ನ್ಯಾ. ನಾಗಮೋಹನದಾಸ್

ಬೆಂಗಳೂರು, ಎ.29: ರೈತರ ಭೂಮಿಯನ್ನು ಉಳ್ಳವರಿಗೆ ನೀಡಿ ಅನ್ನದಾತರಿಗೆ ಮೋಸ ಮಾಡುವ ಉದ್ದೇಶದಿಂದ ಭೂ ಸುಧಾರಣೆ ಕಾಯ್ದೆ ತಿದ್ದುಪಡಿ ಮಸೂದೆಯಾಗಿ ಪರಿವರ್ತನೆ ಆಗಿದೆ ಎಂದು ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಅಭಿಪ್ರಾಯಪಟ್ಟಿದ್ದಾರೆ.

ಶುಕ್ರವಾರ ಸಂಯುಕ್ತ ಕಿಸಾನ್ ಮೋರ್ಚಾ ಕರ್ನಾಟಕ, ರಾಜ್ಯ ಕಬ್ಬು ಬೆಳೆಗಾರರ ಸಂಘಗಳ ವತಿಯಿಂದ ಆಯೋಜಿಸಿದ್ದ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಮರೀಚಿಕೆ ವಿಷಯದ ಕುರಿತ ಚಿಂತನ ಮಂಥನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭೂಮಿ ತಿದ್ದುಪಡಿ ಮಸೂದೆಯ ಉದ್ದೇಶ ಅನ್ನದಾತನ ಕೈಯಿಂದ ಭೂಮಿಯನ್ನು ಕಿತ್ತುಕೊಂಡು ಕಾರ್ಪೊರೇಟ್ ಜನರಿಗೆ ನೀಡುವುದಾಗಿದೆ ಎಂದರು.

ಜಗತ್ತಿನಲ್ಲಿ ನಾಗರಿಕತೆಯ ಜೊತೆಜೊತೆಗೆ ಹುಟ್ಟಿಕೊಂಡ ವೃತ್ತಿ ಎಂದರೆ ಅದು ರೈತನ ಕೆಲಸ. ಆದರೆ ಅಂದಿನಿಂದ ಇಂದಿನವರೆಗೂ ಶೋಷಣೆಗೆ ಒಳಗಾಗುತ್ತಲೇ ಇದ್ದಾನೆ. ರೈತರ ಬೆಂಬಲ ಬೆಲೆ ಕೇಳುವುದು ನ್ಯಾಯಯುತವಾಗಿದೆ. ಆದರೆ ಅದಕ್ಕೆ ಸರಿಯಾಗಿ ಪ್ರತಿಕ್ರಿಯೆ ದೊರಕುತ್ತಿಲ್ಲ. ಅಲ್ಲದೆ, ರೈತರ ಪರ ಸರಕಾರದ ನಿರ್ಲಕ್ಷ್ಯ ತೋರುತ್ತದೆ. ಇದರ ವಿರುದ್ಧ ರೈತರು ಎಲ್ಲರೂ ಒಗ್ಗೂಡಿ ಧ್ವನಿ ಎತ್ತಬೇಕು ಎಂದು ಹೇಳಿದರು.

ಕೃಷಿ ಬೆಲೆ ಆಯೋಗದ ಮಾಜಿ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ಮಾತನಾಡಿ, ಬಾಗಲಕೋಟೆ ತೋಟಗಾರಿಕೆ ವಿವಿಯ ವಿಶ್ರಾಂತ ಕುಲಪತಿ ಡಾ.ಎಸ್.ಬಿ.ದಂಡಿನ, ರಾಜ್ಯ ಕೃಷಿ ಮಾರಾಟ ಮಂಡಳಿಯ ನಿವೃತ್ತ ಮುಖ್ಯ ಪ್ರಧಾನ ವ್ಯವಸ್ಥಾಪಕ ಡಾ. ಬಿ.ಎನ್.ಹುಂಬರವಾಡಿ, ತುಮಕೂರಿನ ಸಹಜ ಬೇಸಾಯ ಶಾಲೆಯ ಡಾ.ಮಂಜುನಾಥ್, ರೈತ ಮುಖಂಡ ಸಿದ್ದನಗೌಡ ಪಾಟೀಲ್ ಮತ್ತಿತರರಿದ್ದರು.

ಕಾರ್ಯಪಾಲಕ ಅಭಿಯಂತರರು
ಲೋಕೋಪಯೋಗಿ ಇಲಾಖೆ
ರಾಮನಗರ ವಿಭಾಗ, ರಾಮನಗರ.

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ ಸಂಖ್ಯೆ : 02/2022-23 ದಿನಾಂಕ : 28-04-2022

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ

2021-22 ನೇ ಸಾಲಿನಲ್ಲಿ ರಾಮನಗರ ವಿಭಾಗ, ವ್ಯಾಪ್ತಿಯಲ್ಲಿ 02 ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ ಹೊರಡಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ. (ಅಂದಾಜು ಮೊತ್ತ ರೂ. 240.00 ಲಕ್ಷದಿಂದ ರೂ. 330.00 ಲಕ್ಷದವರೆಗೆ)

1) ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಿಂದ ಟೆಂಡರ್ ಡಾಕ್ಯೂಮೆಂಟ್ ಅನ್ನು ದಿನಾಂಕ : 29-04-2022 ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. 2) ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ದಿನಾಂಕ : 13-05-2022 ವೇಳೆ 16.00 ಗಂಟೆಯೊಳಗೆ ಸಲ್ಲಿಸುವುದು. 3) ಟೆಂಡರ್‌ಗಳನ್ನು ತೆರೆಯುವ ದಿನಾಂಕ : 16-05-2022 ವೇಳೆ 11.30 ಗಂಟೆ (ಸಾಧ್ಯವಾದಲ್ಲಿ).
ಹೆಚ್ಚಿನ ವಿವರಗಳಿಗಾಗಿ ಈ ಕಛೇರಿಯನ್ನು ಸಂಪರ್ಕಿಸುವುದು.

ಸಹಿ/- ಕಾರ್ಯಪಾಲಕ ಅಭಿಯಂತರರು,
ಲೋಕೋಪಯೋಗಿ ಇಲಾಖೆ, ರಾಮನಗರ ವಿಭಾಗ,
ರಾಮನಗರ.
ಡಿಐಪಿಆರ್/ರಾಮನಗರ/42/ಮಣಿಪಾಲ್/2022-23

MSE
METROPOLITAN STOCK EXCHANGE
METROPOLITAN STOCK EXCHANGE OF INDIA LIMITED
Building A, Unit 205A, 2nd Floor, Piramal Agastya Corporate Park, L.B.S Road, Kurla West, Mumbai - 400 070 • CIN No: U65999MH2008PLC185856

PUBLIC NOTICE

Notice is hereby given that the following Trading Member of the Metropolitan Stock Exchange of India Limited (the Exchange) has been declared a Defaulter under Byelaw 2(B) of Chapter XV and Expelled under Byelaw 2 of Chapter XV of the Byelaw of the Exchange.

Sr. No.	Member Name	SEBI Reg. No.	Declaration Date
1	M/s Sunness Capital India Private Limited.	INZ000163232	25.04.2022

The constituents of the aforementioned member are hereby advised to lodge claims, if any, in the prescribed claim form, against the above mentioned member within 3 months from the date of this notification. No claims filed beyond 3 months will be entertained by the Exchange against the above mentioned member, and it shall be deemed that no such claims exist against the said member. The claims filed against the above mentioned member will be dealt with in accordance with the Byelaws, Rules, Regulations and the procedures of the Exchange.
The maximum compensation limit per investor is Rs. 2 lakhs out of the Investor Protection Fund if found due and payable under the Byelaws, Rules and Regulations of the Exchange.
The claim form along with the relevant papers may be sent to the Defaulters' Committee Section of the Exchange at 'Metropolitan Stock Exchange of India Limited', 205A, 2nd Floor, Piramal Agastya Corporate Park, Kamani Junction, LBS Road, Kurla (West), Mumbai 400 070..
The claim form may be downloaded from https:www.msei.in or may be obtained from the corporate office of the Exchange or the regional / branch offices of the Exchange.
The authorised persons affiliated with the above mentioned member are not authorised henceforth to deal in that capacity. The list of such authorised persons is available on http://www.msei.in/ . Investors may take note of the same.
For **Metropolitan Stock Exchange of India Ltd.**
Sd/-
Senior Vice President
Defaulters' Committee Section
Place: Mumbai
Date: 30/04/2022

ಜಿಲ್ಲಾ ಪಂಚಾಯತ್, ಕೋಲಾರ
ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ,
ಎಸ್.ಎನ್.ಆರ್ ಆಸ್ಪತ್ರೆ ಆವರಣ, ಕೋಲಾರ-563101.
ಇ-ಮೇಲ್: dao.kolar09@gmail.com
ದೂ: 08152-220025
ಸಂ: ಆಯುಷ್/ಕೋ/166/2022-23 ದಿನಾಂಕ: 29.04.2022

ಇ-ಟೆಂಡರ್ ಪ್ರಕ್ರಿಯೆ

ಕೋಲಾರ ಜಿಲ್ಲಾ ಆಯುಷ್ ಕಛೇರಿಯ ಸರ್ಕಾರದ ಅಧಿಕೃತ ಕೆಲಸಗಳ ಉಪಯೋಗಕ್ಕಾಗಿ ಎರಡು ವರ್ಷದ ಅವಧಿಗೆ ಹೊರಗುತ್ತಿಗೆಯಲ್ಲಿ ಒಂದು ಎ.ಸಿ.ಕಾರ್‌ನ್ನು ಒದಗಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999-2000ರನ್ವಯ ಇ-ಟೆಂಡರ್ ಅಧಿಸೂಚನೆ ಹೊರಡಿಸಲಾಗಿದೆ.
(1) ಇ-ಪೋರ್ಟಲ್‌ನಲ್ಲಿ ಟೆಂಡರ್ ನಮೂನೆ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಾರಂಭವಾಗುವ **ದಿನಾಂಕ: 29.04.2022 ಪೂರ್ವಾಹ್ನ 11.00 ಘಂಟೆ.** (2) (1) ಇ-ಪೋರ್ಟಲ್ ಮುಖಾಂತರ ಟೆಂಡರ್ ಬಿಡ್‌ಗಳನ್ನು ಸಲ್ಲಿಸಲು ಕೊನೆ **ದಿನಾಂಕ: 15.05.2022 ಪೂರ್ವಾಹ್ನ 11.00 ಘಂಟೆ.** (3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ, ಸಮಯ ಮತ್ತು ಸ್ಥಳ: **16.05.2022 ಪೂರ್ವಾಹ್ನ 12.00 ಘಂಟೆ, ಜಿಲ್ಲಾ ಆಯುಷ್ ಕಛೇರಿ, ಕೋಲಾರ.** (4) ಆರ್ಥಿಕ ಬಿಡ್ ತೆರೆಯುವ ಸಂಭವನೀಯ ದಿನಾಂಕ, ಸಮಯ ಮತ್ತು ಸ್ಥಳ: **18.05.2022 ಪೂರ್ವಾಹ್ನ 11.30 ಘಂಟೆ, ಜಿಲ್ಲಾ ಆಯುಷ್ ಕಛೇರಿ, ಕೋಲಾರ.**

ಸಹಿ/- ಜಿಲ್ಲಾ ಆಯುಷ್ ಅಧಿಕಾರಿಗಳು, ಕೋಲಾರ.
ವಾಸಾಸಂಇ/ಕೋಲಾರ/ಆರ್.ಓ.ಸಂಖ್ಯೆ54/ಎಂ.ಸಿ.ಎ/2022-23

ಕೋವಿಡ್-19. ಆತಂಕ ಬೇಡ; ಮುನ್ನೆಚ್ಚರಿಕೆ ಇರಲಿ.
ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

ನಗರಸಭಾ ಕಾರ್ಯಾಲಯ, ಭದ್ರಾವತಿ
ತರೀಕೆರೆ ರಸ್ತೆ, ಭದ್ರಾವತಿ, ಶಿವಮೊಗ್ಗ ಜಿಲ್ಲೆ
Phone: 08282-266356,
Email: itstaff_ulb_bhadravathi@yahoo.com,
Web: www.bhadravathicity.mrc.gov.in
ನಂ.ನಸಭ/ನೀಸವಿ/ಜೆಇ1/ಸಿಆರ್./05/2021-22 ದಿನಾಂಕ: 25.04.2022

ಮರು ಟೆಂಡರ್ ಪ್ರಕಟಣೆ
(ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ)

ಭದ್ರಾವತಿ ನಗರಸಭೆಯ ವಿವಿಧ ವಿಭಾಗಗಳಲ್ಲಿ 2022-23 ನೇ ಸಾಲಿನ ನಗರಸಭಾ ನಿಧಿ ಅನುದಾನದಲ್ಲಿ ಇ-ಪ್ರಕ್ಯೂರ್‌ಮೆಂಟ್ ನಲ್ಲಿ ಟೆಂಡರ್‌ಗಳನ್ನು ಕರ್ನಾಟಕ ಸ್ಟ್ಯಾಂಡರ್ಡ್ ಬಿಡ್ ಡಾಕ್ಯುಮೆಂಟ್ K.G-1, K.G-2, KC-6/KC7 ಹಾಗೂ ಕರ್ನಾಟಕ ಪಾರದರ್ಶಕ ಅಧಿನಿಯಮದ ಪ್ರಕಾರ ಟೆಂಡರ್‌ಗಳನ್ನು ಇ-ಪ್ರಕ್ಯೂರ್ಮೆರ್ಂಟ್ ಪೋರ್ಟಲ್ ಮುಖಾಂತರ ಆಹ್ವಾನಿಸಲಾಗಿದ್ದು ಇ- ಪ್ರಕ್ಯೂರ್ ಮೆಂಟ್ ಟೆಂಡರ್ ನಲ್ಲಿ ಭಾಗವಹಿಸಲು ಆಸಕ್ತಿ ವುಳ್ಳವರು ದಿನಾಂಕ 09-05-2022 ರ ಸಂಜೆ 4-00 ಗಂಟೆಯೊಳಗಾಗಿ www.eproc.karnataka.gov.in ನಲ್ಲಿ ತಮ್ಮ ದರಗಳನ್ನು ಸಲ್ಲಿಸಬಹುದಾಗಿದೆ.
1) ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ಸಲ್ಲಿಸಲು ಕಡೆಯ ದಿನಾಂಕ: 09-05-2022 ರ ಸಂಜೆ 4-00 ಗಂಟೆ ವರೆಗೆ. **2)** ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ತೆರೆಯುವ ದಿನಾಂಕ: 10-05-2022 (ಸಂಜೆ 4.00 ಗಂಟೆಯನಂತರ) ಆನ್ ಲೈನ್ ಮೂಲಕ, ಸದರಿ ದಿನಾಂಕ ರಜಾ ದಿನವೆಂದು ಘೋಷಿಷಲ್ಪಟ್ಟಲ್ಲಿ ಮುಂದಿನ ದಿನಾಂಕವನ್ನು ಪರಿಗಣಿಸತಕ್ಕದ್ದು. **3)** ಫಾರಂ ಬೆಲೆ ಮತ್ತು ಇ.ಎಂ.ಡಿ ಬೆಲೆ ಗೆ ಇ-ಪೋರ್ಟಲ್ ಮುಖಾಂತರ ಪಡೆಯಬಹುದು. **4)** ಟೆಂಡರ್ ಅಫ್ ಲೋಡಿಂಗ್‌ಗೆ ಸಂಬಂಧಿಸಿದಂತೆ ಇ-ಪೋರ್ಟಲ್ ಸಹಾಯಕ ದೂರವಾಣಿ 080-22485867 ಅಥವಾ 080-25501216 ಇವರನ್ನು ಸಂಪರ್ಕಿಬಹುದು. ಹೆಚ್ಚಿನ ವಿವರಗಳಿಗೆ www.eproc.karnataka.gov.in ವೆಬ್‌ಸೈಟ್‌ನಲ್ಲಿ ಮತ್ತು ಪೌರಾಯುಕ್ತರು, ನಗರಸಭೆ ಭದ್ರಾವತಿ /ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರಸಭೆ ಭದ್ರಾವತಿ ಈ ಕಛೇರಿಯಲ್ಲಿ ಪಡೆಯಬಹುದು.

ಸಹಿ/-(ಜಿ.ಸಿ.ಗೀತಾರಾಜ್ ಕುಮಾರ್) ಅಧ್ಯಕ್ಷರು, ನಗರಸಭೆ, ಭದ್ರಾವತಿ.
ಸಹಿ/-(ಚನ್ನಪ್ಪ) ಉಪಾಧ್ಯಕ್ಷರು, ನಗರಸಭೆ, ಭದ್ರಾವತಿ.
ಸಹಿ/-(ಸುದೀಪ್ ಕುಮಾರ್.ಕೆ) ಸ್ಥಾಯಿ ಸಮಿತಿ ಅಧ್ಯಕ್ಷರು, ನಗರಸಭೆ, ಭದ್ರಾವತಿ.
ಸಹಿ/-(ಪರಮೇಶ್.ಕೆ. ಕೆ.ಎಂ.ಎ.ಎಸ್) ಪೌರಾಯುಕ್ತರು, ನಗರಸಭೆ, ಭದ್ರಾವತಿ.
ವಾ.ಸಾ.ಸಂ.ಇ/ಎಂಸಿಎ/ಶಿ/120/04/22-23/134

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿರಾ
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ. ಶಿರಾ ತಾಲ್ಲೂಕು ಶಿರಾ.
ಸಂ:ಶಿಅಯೋಶಿ:ಬಾಮೂಸಿ:ಇ-ಟೆಂಡರ್"2022-23 ದಿನಾಂಕ:22.04.2022

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ
(Notice inviting Tender through E- Procurement)

ಶಿಶು ಅಭಿವೃದ್ಧಿ ಯೋಜನೆ, ಶಿರಾ ಇಲ್ಲಿ "ಭಾಗ್ಯಲಕ್ಷ್ಮೀ ಯೋಜನೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಮೆಸೆಂಜರ್ ಹುದ್ದೆಗಳನ್ನು ಬಾಹ್ಯಮೂಲದಿಂದ ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸಲು 2022-23 ನೇ ಸಾಲಿಗೆ ಟೆಂಡರ್
ಶಿಶು ಅಭಿವೃದ್ಧಿ ಯೋಜನೆ, ಶಿರಾ ಇಲ್ಲಿ "ಭಾಗ್ಯಲಕ್ಷ್ಮೀ ಯೋಜನೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಮೆಸೆಂಜರ್ ಹುದ್ದೆಗಳನ್ನು ಸೇವೆ ಸಲ್ಲಿಸಲು ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಅರ್ಹ ಬಾಹ್ಯಮೂಲ ಸ್ವಯಂಸೇವಾ ಸಂಸ್ಥೆಗಳು/ಏಜೆನ್ಸಿಗಳಿಂದ 2022-23ನೇ ಸಾಲಿಗೆ ದ್ವಿ-ಲಕೋಟೆ ಪದ್ಧತಿಯಲ್ಲಿ ಟೆಂಡರ್‌ಗಳನ್ನು ಈ ಮುಂದೆ ಹೇಳಲಾಗಿರುವ ನಿಂಬಂಧನೆಗಳಿಗೊಳಪಟ್ಟು ಆಹ್ವಾನಿಸಲಾಗಿದೆ.
ಟೆಂಡರ್‌ನ ವಿವರ: 1. ಶಿಶು ಅಭಿವೃದ್ಧಿ ಯೋಜನೆ, ಶಿರಾ ಇಲ್ಲಿ "ಭಾಗ್ಯಲಕ್ಷ್ಮೀ ಯೋಜನೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಕಂಪ್ಯೂಟರ್ ಆಪರೇಟರ್ ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಒಂದು ಮೆಸೆಂಜರ್ ಹುದ್ದೆಗಳಿಗೆ. ಟೆಂಡರ್‌ನ ಅಂದಾಜು ಮೊತ್ತ (ವಾರ್ಷಿಕ): **ರೂ.686680.** ಇ.ಎಂ.ಡಿ ಮೊತ್ತ **ರೂ.15,000/-ಗಳು**
ವಿವರ ದಿನಾಂಕ ಮತ್ತು ಸಮಯ: 1. 'ಇ' - ಪ್ರೊಕ್ಯೂರ್‌ಮೆಂಟ್'ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: **25.04.2022. 2.** ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **16.05.2022** ರಂದು ಸಮಯ: ಮಧ್ಯಾಹ್ನ 3.00ಗಂಟೆಗೆ. **3.** Technical Bid ಅನ್ನು ತೆರೆಯುವ ದಿನಾಂಕ: **17.05.2022** ರಂದುಸಮಯ: ಮಧ್ಯಾಹ್ನ 3.00ಗಂಟೆಗೆ. **4.** Financial Bid ಅನ್ನು ತೆರೆಯುವ ದಿನಾಂಕ: **18.05.2022** ರಂದು ಸಮಯ ಬೆಳಿಗ್ಗೆ 11.00ಗಂಟೆಗೆ

ಸಹಿ/- ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಶಿರಾ ತಾಲ್ಲೂಕು, ಶಿರಾ
DIPR/TUM/65/MCA/2021-22

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಶಿಡ್ಲಘಟ್ಟ
ಹಳೇ ರೇಷ್ಮೆಗೂಡಿನ ಮಾರುಕಟ್ಟೆ ಹತ್ತಿರ, ಶಿಡ್ಲಘಟ್ಟ,
ಚಿಕ್ಕಬಳ್ಳಾಪುರ ಜಿಲ್ಲೆ-562105. ದೂ: 08158-256497
ಇ-ಮೇಲ್: cdposid2@gmail.com
ಸಂಖ್ಯೆ: ಶಿಅಯೋ/ಶಿ.ಘ/ಹೊ.ಗು.ಟೆಂ.ಪ್ರ/2022-23/34 ದಿನಾಂಕ: 25.04.2022

ಟೆಂಡರ್ ಪ್ರಕಟಣೆ

ವಿಷಯ: 2022-23ನೇ ಸಾಲಿಗೆ ಶಿಡ್ಲಘಟ್ಟ ತಾಲ್ಲೂಕು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಛೇರಿಗಳಿಗೆ ಬಾಹ್ಯ ಮೂಲದಿಂದ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಅತೀ ಕಡಿಮೆ ದರದಲ್ಲಿ ಒಂದು ರಾಜ್ಯ, ಒಂದು ಪ್ರಾದೇಶಿಕ ಹಾಗೂ ಒಂದು ಜಿಲ್ಲಾ ಮಟ್ಟದ ದಿನಪತ್ರಿಕೆಯಲ್ಲಿ ಪ್ರಕಟಿಸುವ ಕುರಿತು.
ಉಲ್ಲೇಖ: ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್, ಚಿಕ್ಕಬಳ್ಳಾಪುರ ಇವರ ದಿನಾಂಕ: 31.04.2022ರಲ್ಲಿ ಅನುಮೋದಿಸಿದಂತೆ.
2022-23ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ, ಶಿಡ್ಲಘಟ್ಟ ಶಿಶು ಅಭಿವೃದ್ಧಿ ಯೋಜನಾ ಕಛೇರಿಯಲ್ಲಿ ಖಾಲಿ ಇರುವ 01 ಕಂಪ್ಯೂಟರ್ ಆಪರೇಟರ್, 01 ವಾಹನ ಚಾಲಕರು ಮತ್ತು 02 ''ಡಿ'' ಗ್ರೂಪ್ ನೌಕರರ ಒಟ್ಟು 04 ಹುದ್ದೆಗಳಿಗೆ ಸಿಬ್ಬಂದಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮರು ಟೆಂಡರ್ ಆಹ್ವಾನಿಸಲಾಗಿದ್ದು, ಜಾಹಿರಾತು ನೀತಿ ಅನ್ವಯ ಪ್ರಕಟಿಸಲು ತಮ್ಮಲ್ಲಿ ಕೋರಿದೆ.
(1) ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ: **25.04.2022ರಿಂದ 02.05.2022ರ ಸಾಯಂಕಾಲ 5.00 ಘಂಟೆವರೆಗೆ.**
(2) ಇಎಂಡಿ ಮೊತ್ತ: **ರೂ. 25,000/-.** (3) ಟೆಕ್ನಿಕಲ್ ಬಿಡ್ ತೆರೆಯುವ ದಿನಾಂಕ: **04.05.2022ರಂದು.** (4) ಆರ್ಥಿಕ ಬಿಡ್ ತೆರೆಯುವ ದಿನಾಂಕ: **05.05.2022.** (5) ಟೆಂಡರ್‌ನ ಅಂದಾಜು ಮೌಲ್ಯ: **ರೂ. 9.60 ಲಕ್ಷಗಳು.**
ಹೆಚ್ಚಿನ ಮಾಹಿತಿಗಾಗಿ ಟೆಂಡರ್ ಪೂರ್ಣ ವಿವರಗಳನ್ನು ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್‌ನಲ್ಲಿ (**https://www.eproc.karnataka.gov.in**) ಮಾತ್ರ ಪಡೆಯಬಹುದಾಗಿರುತ್ತದೆ.
ಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ: 08158-256497ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿರುತ್ತದೆ.

ಸಹಿ/- ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಶಿಡ್ಲಘಟ್ಟ
ವಾ.ಸಾ.ಸಂ.ಇ/ಚಿಕ್ಕಬಳ್ಳಾಪುರ/ಆರ್.ಓ.ಸಂಖ್ಯೆ 37/ಎಂಸಿಎ/2022-23

ಕೋವಿಡ್-19 ಲಕ್ಷಣಗಳು ಇವೆಯೇ? ಸಂಪರ್ಕಿಸಿ, ಆಪ್ತಮಿತ್ರ ಸಹಾಯವಾಣಿ 14410.
ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

ನೈಋತ್ಯ ರೈಲ್ವೆ
ಟೆಂಡರ್ ಸೂಚನೆ ಸಂ. CAO/CN/BNC/22/2022
ದಿನಾಂಕ: 23.04.2022
ಈ ಕೆಳ ಸಹಿದಾರರು, ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಗಡೆ ನೀಡಿರುವ ಕಾಮಗಾರಿಗಳಿಗೆ ಇ-ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ:

ಕಾಮಗಾರಿಯ ಹೆಸರು	ಅಂದಾಜು ಮೌಲ್ಯ
ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಬೈಯಪ್ಪನಹಳ್ಳಿಯಲ್ಲಿ ವಿದ್ಯುತ್ ಸರಬರಾಜು ವ್ಯವಸ್ಥೆಗಳ ಉಳಿದ ಕೆಲಸಗಳು, 4 ಸಂಖ್ಯೆಗಳ 1 ಎಂವಿಎ ಟ್ರಾನ್ಸ್‌ಫಾರ್ಮರ್‌ಗಳನ್ನು ಒದಗಿಸುವುದು ಮತ್ತು ಪಾರ್ಸೆಲ್ ಕಚೇರಿಯ ವಿದ್ಯುದ್ದೀಕರಣ.	ರೂ. 2,92,30,100/-

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 17-05-2022, 11:00 ಗಂಟೆಯವರೆಗೆ
ಹೆಚ್ಚಿನ ಮಾಹಿತಿಗಾಗಿ www.ireps.gov.in ಗೆ ಲಾಗ್ ಆನ್ ಆಗಿ
ಉಪ ಮುಖ್ಯ ಎಲೆಕ್ಟ್ರಿಕಲ್ ಇಂಜಿನೀಯರ್ / ಜ ನಿರ್ಮಾಣ / ಬೆಂಗಳೂರು ಕಂಟೋನ್ಮೆಂಟ್
PUB/70/AAV/PRB/SWR/2022-23
S.W.Railways SWRRLY SWRRLY

ನಗರಸಭಾ ಕಾರ್ಯಾಲಯ, ಚಿಕ್ಕಮಗಳೂರು.
Office : 08262- 230420 Fax:0862232272 Commissioner : 08262-232272
Help Line : 08262- 232222 E-Mail ID: comm_ckg@yahoo.co.in
Website : www.chickmagalur.gov.in
ಸಂ.ಸಿಎಂಸಿ/ಸಿಕೆಎಂ/15ನೇಹಕಾ/ಸಿಆರ್/03/2022-23 ದಿನಾಂಕ: 26.04.2022.

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ದರ್ಜೆಯ ಸಿವಿಲ್ ಗುತ್ತಿಗೆದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ದ್ವಿ-ಲಕೋಟೆ ಪದ್ಧತಿಯಲ್ಲಿ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತರು ಷರತ್ತುಗಳಿಗೊಳಪಟ್ಟು ಟೆಂಡರ್ ಸಲ್ಲಿಸಬಹುದಾಗಿದೆ.
ಕ್ರ.ಸಂ. 1. ಕಾಮಗಾರಿ ವಿವರ: DMA/2022-23/OW/WORK_INDENT 130518 **ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):** 100.00 **ಇ.ಎಂ.ಡಿ.(ರೂ.ಗಳಲ್ಲಿ):** 1,66,381.00/-
ಟೆಂಡರ್ ಫಾರಂ ಬೆಲೆ ಇ-ಪ್ರೊಕ್ಯೂರ್‌ಮೆಂಟ್‌ನಂತೆ, ಕಾಲಾವಧಿ-06 ತಿಂಗಳು (ಮಳೆಗಾಲ ಹೊರತುಪಡಿಸಿ)
1. ಇ-ಪ್ರೊಕ್ಯೂರ್ ಮೆಂಟ್ ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ:11.05.2022ರ 17.30 ಗಂಟೆಯವರೆಗೆ. 2. ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 13.05.2022 ರ 11.00 ಗಂಟೆಗೆ 3. ಆರ್ಥಿಕ ಬಿಡ್ ತೆರೆಯುವ ದಿನಾಂಕ: 16.05.2022 ರ 11.00 ಗಂಟೆಗೆ 4. ಟೆಂಡರ್ ಪೂರ್ವಭಾವಿ ಸಭೆ ದಿನಾಂಕ: 07.05.2022ಕೆ ಸಂಜೆ 4.00 ಗಂಟೆಗೆ ನಗರಸಭಾ ಕಛೇರಿಯಲ್ಲಿ
ಹೆಚ್ಚಿನ ವಿವರಗಳನ್ನು ಈ ಕಛೇರಿಯ ಕೆಲಸದ ವೇಳೆಯಲ್ಲಿ ಮತು https://eproc.karnataka.gov.in ನಲ್ಲಿ ಪಡೆಯಬಹುದಾಗಿದೆ. ಯಾವುದೇ ಬದಲಾವಣೆಗಳಾದ್ದಲ್ಲಿ ಇ-ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು. ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/- ವರಸಿದ್ಧಿ ವೇಣುಗೋಪಾಲ್ ಅಧ್ಯಕ್ಷರು, ನಗರಸಭೆ, ಚಿಕ್ಕಮಗಳೂರು
ಸಹಿ/- ಸಿ.ಹೆಚ್ ಉಮಾದೇವಿ ಕೃಷ್ಣಪ್ಪ, ಉಪಾಧ್ಯಕ್ಷರು, ನಗರಸಭೆ, ಚಿಕ್ಕಮಗಳೂರು.
ಸಹಿ/- ಬಿ.ಸಿ.ಬಸವರಾಜು ಕೆ.ಎಂ.ಎ.ಎಸ್. ಪೌರಾಯುಕ್ತರು ನಗರಸಭೆ, ಚಿಕ್ಕಮಗಳೂರು.
ವಾ.ಸಾ.ಸಂ.ಇ/ಎಂಸಿಎ/ಚಿ/12/22-23/119